# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 821 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಬೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 26-12-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ರೈತರ ಪಂಪ್‌ಸೆಟ್‌ಗಳಿಗೆ ಸರ್ಕಾರ ನೀಡುತ್ತಿರುವ ಮೋಟಾರು ಲೈನ್ ವಿದ್ಯುತ್‌ನ್ನು ದಿನಕ್ಕೆ ಎಷ್ಟು ಗಂಟೆಗಳ ಕಾಲ ನೀಡಲಾಗುತ್ತಿದೆ; | ಸರ್ಕಾರದ ಆದೇಶ ಸಂಖ್ಯೆ: ಇಎನ್ 28 ವಿಎಸ್‌ಸಿ 2013 ದಿನಾಂಕ: 22-01-2014 ರಂತೆ ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿನ ರೈತರ ಕೃಷಿ ಪಂಪ್‌ಸೆಟ್ಟುಗಳಿಗೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್‌ನ್ನು ಸರಬರಾಜು ನೀಡಲು ಕ್ರಮ ವಹಿಸಲಾಗಿರುತ್ತದೆ. ತಾಂತ್ರಿಕ ಸಾಧ್ಯತೆಯಿರುವ ಪ್ರದೇಶಗಳಲ್ಲಿ ಹಗಲಿನಲ್ಲಿಯೇ 7 ಗಂಟೆಗಳ ಕಾಲ ಮತ್ತು ಉಳಿದ ಭಾಗಗಳಲ್ಲಿ ಹಗಲು 4 ಗಂಟೆ ಮತ್ತು ರಾತ್ರಿ ವೇಳೆಯಲ್ಲಿ 3 ಗಂಟೆಗಳ ವಿದ್ಯುತ್ತನ್ನು ಬ್ಯಾಚ್‌ಗಳಲ್ಲಿ ನೀಡಲಾಗುತ್ತಿದೆ. ಸದರಿ ಅವಧಿಯನ್ನು ವಿಸ್ತರಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ರೈತರ ಪಂಪ್‌ಸೆಟ್‌ಗಳಿಗೆ ನೀಡುತ್ತಿರುವ ವಿದ್ಯುತ್ ಅವಧಿಯು ಬಹಳ ಕಡಿಮೆಯಾಗಿರುವುದರಿಂದ ರೈತರು ಬೆಳೆದ ಬೆಳೆಗಳಿಗೆ ಪೂರ್ಣ ಪ್ರಮಾಣದಲ್ಲಿ ಪಂಪ್‌ಸೆಟ್‌ನಿಂದ ನೀರನ್ನು ಬಿಡಲಾಗುತ್ತಿರುವುದರಿಂದ ಈ ಪಂಪ್‌ಸೆಟ್ ಮೋಟಾರು ಲೈನ್ ಅವಧಿಯನ್ನು ಸರ್ಕಾರ ಹೆಚ್ಚಳ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ; | |
| ಇ) | ರಾಜ್ಯದಲ್ಲಿ ಸಾರ್ವಜನಿಕರ ಮನೆಗಳಿಗೆ ನೀಡುತ್ತಿರುವ ವಿದ್ಯುತ್ ಸರಬರಾಜನ್ನು ದೇಶದ ಇತರ ರಾಜ್ಯಗಳಾದ ದೆಹಲಿ ಮಾದರಿಯಂತೆ ಎಲ್ಲಾ ಮನೆಗಳಿಗೆ ಉಚಿತ ವಿದ್ಯುತ್‌ನ್ನು ಸರ್ಕಾರ ನೀಡಲು ತೆಗೆದುಕೊಂಡಿರುವ ಕ್ರಮವೇನು? | ರಾಜ್ಯ ಸರ್ಕಾರವು ರಾಜ್ಯದಲ್ಲಿ ಈ ಕೆಳಕಂಡ ಪ್ರವರ್ಗದ ವಿದ್ಯುತ್ ಗ್ರಾಹಕರುಗಳಿಗೆ ಉಚಿತ ವಿದ್ಯುತ್ ಒದಗಿಸಲಾಗುತ್ತಿದೆ.<br>• ರಾಜ್ಯದಲ್ಲಿರುವ ಭಾಗ್ಯ ಜ್ಯೋತಿ / ಕುಟೀರ ಜ್ಯೋತಿ ವಿದ್ಯುತ್ ಸ್ಥಾವರಗಳ ಮಾಸಿಕ 40 ಯೂನಿಟ್‌ವರೆಗಿನ ಬಳಕೆಗೆ ಉಚಿತ ವಿದ್ಯುತ್ ಒದಗಿಸಲಾಗುತ್ತಿದೆ.<br>• ರಾಜ್ಯದ ಎಲ್ಲಾ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಬಡತನ ರೇಖೆಗಿಂತ ಕೆಳಗಿರುವ (ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿರುವ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳ ಗೃಹ ವಿದ್ಯುತ್ ಬಳಕೆದಾರರಿಗೆ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಭಾಗ್ಯಜ್ಯೋತಿ / ಕುಟೀರಜ್ಯೋತಿ ಬಳಕೆದಾರರನ್ನು ಒಳಗೊಂಡಂತೆ) DBT ವ್ಯವಸ್ಥೆಯಡಿ ಮಾಸಿಕ 75 ಯೂನಿಟ್‌ಗಳವರೆಗೆ ದಿನಾಂಕ:01.05.2022 ರಿಂದ ಅನ್ವಯವಾಗುವಂತೆ (ಅಮೃತ ಜ್ಯೋತಿ ಕಾರ್ಯ ಕ್ರಮದಡಿ) ಉಚಿತ ವಿದ್ಯುತ್ ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>ಪ್ರಸ್ತುತ ರಾಜ್ಯದಲ್ಲಿನ ಸಾರ್ವಜನಿಕರ ಇತರೆ ಪ್ರವರ್ಗದ ಎಲ್ಲಾ ಮನೆಗಳಿಗೆ ಉಚಿತ ವಿದ್ಯುತ್ ಒದಗಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಎನರ್ಜಿ 276 ಇಬಿಎಸ್ 2022

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು